**<u>ದಿನಾಂಕಃ 20.09.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಂದುವರಿದ ಪಾಟೀ ಸವಾಲು ಃ ಪ್ರತಿವಾದಿಗಳ ಪರ ಶ್ರೀ ವೈ.ಕೆ. ವಕೀಲರಿಂದಃ</u>**

1) ದಿಃ 06.07.2019 ರಿಂದ 08.09.2021 ರವರೆಗೆ ಪ್ರತಿವಾದಿಗಳು ಶೇ.1 ರಂತೆ ನನಗೆ ಬಡ್ಡಿಯನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ನನ್ನನ್ನು ಭೇಟಿಯಾಗಿ ಹಣವನ್ನು ಪಡೆದುಕೊಂಡ ಕಾರಣ ಕ್ರಯದ ಕರಾರು ಪತ್ರವನ್ನು ರದ್ದುಪಡಿಸುವಂತೆ ಕೇಳಿದ್ದರು ಎಂದರೆ ಸರಿಯಲ್ಲ. ದಾವಾ ಆಸ್ತಿಯ ಮೌಲ್ಯ 1 ಕೋಟಿಗೂ ಅಧಿಕ ಇರುವ ಕಾರಣ ಅದನ್ನು ಲಪಟಾಯಿಸಲು ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದ ಸಂಗತಿಗಳು ಸುಳ್ಳಿನಿಂದ ಕೂಡಿದೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ನನ್ನಿಂದ ಪಡೆದ ಹಣವನ್ನು ಹಿಂತಿರುಗಿಸಿರುವ ಕಾರಣ ಅವರು ನನಗೆ ಕ್ರಯಪತ್ರವನ್ನು ಮಾಡಿಕೊಡಲು ಬಾದ್ಯಸ್ಥರಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳ ಆಸ್ತಿಯನ್ನು ಲಪಟಾಯಿಸಲು ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು).

ಓ. ಹೆ. ಕೇ. ಸರಿ ಇದೆ.

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ. ದಂ.ಗಳ**
**ನ್ಯಾಯಾಲಯ, ಚನ್ನಪಟ್ಟಣ.**